## ದಿನಾಂಕ :07.11.2020 ರಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಂಖ್ಯೆ-180 ರ ವಾರ್ಡ್ ಸಮಿತಿಯ ಸಭೆಯ ನಡವಳಿಗಳು :-

### ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು.

1) ಶ್ರೀ ಹೇಮಂತ್ ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ಉಪವಿಭಾಗ ಹಾಗೂ ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ.

2) ಶ್ರೀ ಅವೀಶ ಹೆಚ್.ಎಂ, ವಾರ್ಡ್ ಸಮಿತಿ ಸಂಚಾಲಕರು ಮತ್ತು ಕಿರಿಯ ಅಭಿಯಂತರರು ಬನಶಂಕರಿ ದೇವಸ್ಥಾನ ವಾರ್ಡ್ ಸಂಖ್ಯೆ-180.

3) ಶ್ರೀ ರುದ್ರೇಶ್, ಸಹಾಯಕ ಅಭಿಯಂತರರು, ಬೆಸ್ಕಾಂ ಉಪ ವಿಭಾಗ.

4) ಶ್ರೀ ರಾಜಶೇಖರ್, ಸಹಾಯಕ ಅಭಿಯಂತರರು, ಬೆಸ್ಕಾಂ ಉಪ ವಿಭಾಗ.

5) ಶ್ರೀ ಸೈಯದ್ ಮಯೀಝ್ ಅಹಮದ್, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ

6) ರಾಜೇಶ್ವರಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ

7) ಶ್ರೀ ಜಯಹರಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಬಿ.ಬಿ.ಎಂ.ಪಿ

8) ಕಾವ್ಯ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಿ.ಬಿ.ಎಂ.ಪಿ

9) ಶ್ರೀ ಹರೀಶ್, ಉಪ ವಲಯ ಅರಣ್ಯಾಧಿಕಾರಿಗಳು, ಬಿ.ಬಿ.ಎಂ.ಪಿ

10) ಶ್ರೀ ಚನ್ನಪ್ಪ, ಎ.ಎಸ್.ಐ ಬನಶಂಕರಿ ಟ್ರಾಫಿಕ್ ಪೋಲೀಸ್ ಠಾಣೆ.

11) ಶ್ರೀ ಅಪ್ಪಾಜಿ ಎ.ಎಸ್.ಐ ಕುಮಾರಸ್ವಾಮಿ ಲೇಔಟ್ ಟ್ರಾಫಿಕ್ ಪೋಲೀಸ್ ಠಾಣೆ.

12) ಶ್ರೀ ಚನ್ನಪ್ಪ, ಪ್ರಗತಿಪುರ ನಿವಾಸಿ ಹಾಗೂ ವಾರ್ಡ್ ಸಮಿತಿ ಸದಸ್ಯರು

13) ಶ್ರೀ ಮೆಹತಾಬ್ ಫಯಾಝ್, ವಿವೇಕಾನಂದ ಕಾಲೋನಿ ನಿವಾಸಿ ಹಾಗೂ ವಾರ್ಡ್ ಸಮಿತಿ ಸದಸ್ಯರು.

14) ಶ್ರೀ ಪ್ಯಾರು, ಸರಬಂಡೆಪಾಳ್ಯ ನಿವಾಸಿ ಹಾಗೂ ವಾರ್ಡ್ ಸಮಿತಿ ಸದಸ್ಯರು

ವಾರ್ಡ್ ಸಮಿತಿ ಸಂಚಾಲಕರು ಮತ್ತು ಕಿರಿಯ ಅಭಿಯಂತರರು ಬನಶಂಕರಿ ದೇವಸ್ಥಾನ ವಾರ್ಡ್ ಸಂಖ್ಯೆ-180 ರವರಾದ ಶ್ರೀ ಅವೀಶ ಹೆಚ್.ಎಂ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.**

ವಾರ್ಡ್‌ನ ನೋಡೆಲ್ ಅಧಿಕಾರಿಯವರು ಮೇಲಿನ ಅಧಿಕಾರಿಗಳ ಪರಿಚಯಿಸಲಾಯಿತು ಹಾಗೂ ನೋಡೆಲ್ ಅಧಿಕಾರಿಗಳ ಜೊತೆಯಲ್ಲಿ ಪ್ರಥಮ ಸಭೆಯನ್ನು ಅಯೋಜಿಸಲಾಗಿದ್ದು, ಪ್ರಮುಖವಾಗಿ ಕೋವಿಡ್-19 ರ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮೊದಲನೇ ಆಧ್ಯತೆಯನ್ನು ಕೋವಿಡ್-19 ಗೆ ಒತ್ತು ನೀಡುವಂತೆ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

Scanned with CamScanner

1) ಸಭೆಯಲ್ಲಿ ಹಾಜರಿದ್ದ, ಕಂದಾಯ ಇಲಾಖೆಯ ಅಧಿಕಾರಿಗಳು ನೋಡೆಲ್ ಅಧಿಕಾರಿಗಳಿಗೆ ಒಟ್ಟು ಮತದಾರರು 33,000 ಒಟ್ಟು ಮನೆಗಳ ಸಂಖ್ಯೆ 5,194 ಎಂದು ತಿಳಿಸಿದರು.

2) ನೋಡಲ್ ಅಧಿಕಾರಿಗಳು ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಯು.ಜಿ. ಕೇಬಲ್ ಕಾಮಗಾರಿಯ ಸರ್ವೆ ಕಾರ್ಯ ಪೂರ್ಣಗೊಂಡ ನಂತರ ರಸ್ತೆ ಕಟಾವಣೆಗೆ MARS ಅಪ್ಲಿಕೇಷನ್ ಮೂಲಕ ಅನುಮತಿ ಪಡೆಯಲು ತಿಳಿಸಿದರು.

3) ನೋಡಲ್ ಅಧಿಕಾರಿಗಳು ಮಾತನಾಡಿ ವಸತಿ ಕಟ್ಟಡ ಹಾಗೂ ವಾಣಿಜ್ಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವಾಗ ಮಾಲೀಕರಿಂದ ರಸ್ತೆ ಕಟಾವಣೆಗೆ ಬಿ.ಬಿ.ಎಂ.ಪಿ ವತಿಯಿಂದ ಅನುಮತಿ ಪಡೆದಿರುವ ಅನುಮತಿ ಪತ್ರವನ್ನು ಪಡೆದು ವಿದ್ಯುತ್ ಸಂಪರ್ಕ ನೀಡಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.

4) ನೋಡಲ್ ಅಧಿಕಾರಿಗಳು ಮಾತನಾಡಿ ವಿಧ್ಯುತ್ ತಂತಿಗಳಿಗೆ ಹತ್ತಿರ ಇರುವ ಮರದ ಕೊಂಬೆಗಳನ್ನು ಕತ್ತರಿಸಲಾಗುತ್ತಿದ್ದು, ಸದರಿ ಕತ್ತರಿಸಿರುವ ಕೊಂಬೆಗಳನ್ನು ವಿಲೇವಾರಿ ಮಾಡದಿರುವುದನ್ನು ಕಿರಿಯ ಆರೋಗ್ಯ ಪರಿವೀಕ್ಷಕರ ಸಭೆಯ ಗಮನಕ್ಕೆ ತಂದರು. ಈ ವಿಷಯವಾಗಿ ನೋಡೆಲ್ ಅಧಿಕಾರಿಯವರು ಕತ್ತರಿಸಿದ ಮರದ ಕೊಂಬೆಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.

5) ನೋಡಲ್ ಅಧಿಕಾರಿಗಳು ಮಾತನಾಡಿ ಪೈಪ್‌ಲೈನ್ ರಸ್ತೆಯ ಕೃಷ್ಣ ರೆಡ್ಡಿ ಲೇಔಟ್ ನಮಸ್ತೆ ಗಾರ್ಮೆಂಟ್ಸ್ ರಸ್ತೆಯಲ್ಲಿ ಒಳಚರಂಡಿ ಮಾರ್ಗವು ಇಲ್ಲದಿರುವ ಕಾರಣ ಶೌಚಾಲಯದ ತ್ಯಾಜ್ಯವನ್ನು ರಸ್ತೆ ಬದಿ ಚರಂಡಿಗೆ ಬಿಡಲಾಗುತ್ತಿದ್ದು, ಸದರಿ ರಸ್ತೆಯಲ್ಲಿ ಒಳಚರಂಡಿ ಕೊಳವೆ ಮಾರ್ಗವನ್ನು ತುರ್ತಾಗಿ ನಿರ್ಮಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ತಿಳಿಸಿದರು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಗೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ಅವರನ್ನು ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ಹಾಗೂ ಕಿರಿಯ ಅಭಿಯಂತರರು

07/11/2020
ವಾರ್ಡ್ 180 ರ ನೋಡಲ್ ಅಧಿಕಾರಿ
ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು,
ಬಸವನಗುಡಿ ಉಪವಿಭಾಗ

Scanned with CamScanner